ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: L.A. ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE 18/12/19

# ಡಿ.22ಕ್ಕೆ ನೂತನ ಶಾಸಕರಿಗೆ ಪ್ರಮಾಣ ವಚನ ಬೋಧನೆ

**ಬೆಂಗಳೂರು:** ಉಪಚುನಾವಣೆಯಲ್ಲಿ ಗೆದ್ದು ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಲು ಸಜ್ಜಾಗುತ್ತಿರುವ ಶಾಸಕರಿಗೆ, ಭಾನುವಾರ ಶಾಸಕ ಸ್ಥಾನಕ್ಕೆ ಪ್ರಮಾಣವಚನ ಬೋಧಿಸಲು ವಿಧಾನಸಭಾ ಕಾರ್ಯಾಲಯ ಸಿದ್ಧತೆ ನಡೆಸಿಕೊಂಡಿದೆ. ರಾಜ್ಯದಲ್ಲಿ ನಡೆದ 15 ಕ್ಷೇತ್ರಗಳ ಉಪಚುನಾವಣೆಯಲ್ಲಿ ಗೆದ್ದಿರುವ ಅಭ್ಯರ್ಥಿಗಳಿಗೆ ಡಿ.22ರಂದು ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಪ್ರಮಾಣವಚನ ಬೋಧಿಸಲಿದ್ದಾರೆ. ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನೂತನ ಶಾಸಕರಿಗೆ ಅಧಿಕಾರ ಹಾಗೂ ಗೌಪ್ಯತೆ ಪ್ರಮಾಣವಚನ ಬೋಧಿಸುವರು. ಬಿಜೆಪಿಯ 12, ಕಾಂಗ್ರೆಸ್‌ನ ಇಬ್ಬರು ಹಾಗೂ ಒಬ್ಬ ಪಕ್ಷೇತರ ಶಾಸಕ ಸೇರಿದಂತೆ ಒಟ್ಟು 15 ಶಾಸಕರು ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಎಸ್.ಟಿ.ಸೋಮಶೇಖರ್(ಯಶವಂತಪುರ), ಕೆ.ಗೋಪಾಲಯ್ಯ( ಮಹಾಲಕ್ಷ್ಮಿ ಲೇಔಟ್), ಭೈರತಿ ಬಸವ ರಾಜ್(ಕೆ.ಆರ್.ಪುರ), ರಿಜ್ವಾನ್ ಅರ್ಷದ್ (ಶಿವಾಜಿನಗರ), ಶರತ್ ಬಚ್ಚೇಗೌಡ (ಹೊಸಕೋಟೆ) ಡಾ.ಕೆ.ಸುಧಾಕರ್ (ಚಿಕ್ಕಬಳ್ಳಾಪುರ), ಕೆ.ಸಿ.ನಾರಾ ಯಣಗೌಡ(ಕೆ.ಆರ್.ಪೇಟೆ) ಎಚ್.ಪಿ. ಮಂಜುನಾಥ್(ಹುಣಸೂರು), ಅರುಣ್ ಕುಮಾರ್ ಪೂಜಾರ್ (ರಾಣೆಬೆನ್ನೂರು), ಬಿ.ಸಿ.ಪಾಟೀಲ್ (ಹಿರೇಕೆರೂರು), ಆನಂದ್ ಸಿಂಗ್(ವಿಜಯನಗರ), ರಮೇಶ್ ಜಾರಕಿಹೊಳಿ(ಗೋಕಾಕ), ಮಹೇಶ್ ಕುಮಟಳ್ಳಿ (ಅಥಣಿ) ಹಾಗೂ ಶ್ರೀಮಂತ್ ಪಾಟೀಲ್(ಕಾಗವಾಡ) ಅವರು ಶಾಸಕರಾಗಿ ಅಧಿಕಾರ ಸ್ವೀಕರಿಸಲಿದ್ದಾರೆ. ತೆರವಾಗಿದ್ದ 17 ಕ್ಷೇತ್ರಗಳ ಪೈಕಿ 15 ಕ್ಷೇತ್ರಗಳಿಗೆ ಡಿ.5ರಂದು ಉಪಚುನಾವಣೆ ನಡೆದು ಡಿ.9ರಂದು ಫಲಿತಾಂಶ ಪ್ರಕಟಗೊಂಡಿತ್ತು. 12 ಕ್ಷೇತ್ರಗಳಲ್ಲಿ ಬಿಜೆಪಿ ದಿಗ್ವಿಜಯ ಸಾಧಿಸಿದ್ದರಿಂದ ವಿಧಾನಸಭೆಯಲ್ಲಿ ಸ್ಪಷ್ಟ ಬಹುಮತ ಪಡೆದಿದೆ.